ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಮಂಗಳವಾರ, ದಿನಾಂಕ: 22ನೇ ಸೆಪ್ಟಂಬರ್, 2020

ಸ್ಥಳೀಯಾಡಳಿತ ಸಂಸ್ಥೆಗಳ ಚುನಾವಣೆಯ ಕುರಿತಂತೆ ಮಾಹಿತಿ

ಶ್ರೀ ಕೆ.ಹರೀಶ್‌ಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು):-

173 (234) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಸ್ಥಳೀಯಾಡಳಿತ ಸಂಸ್ಥೆಗಳ ಚುನಾವಣೆ ನಡೆದು ಎರಡು ವರ್ಷಗಳು ಕಳೆದಿದ್ದು ಅಧ್ಯಕ್ಷರು/ಉಪಾಧ್ಯಕ್ಷರುಗಳ ಆಯ್ಕೆಯು ವಿಳಂಬವಾಗಿರುವುದು ಸರ್ಕಾರ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಕುರಿತಂತೆ ಕೈಗೊಂಡ ಕ್ರಮಗಳೇನು;

(ಆ) ಸ್ಥಳೀಯ ಸಂಸ್ಥೆಗಳಲ್ಲಿ ಆಯ್ಕೆಯ ಪ್ರಕ್ರಿಯೇ ನಡೆಯದಿರುವ ಸ್ಥಳೀಯ ಸಂಸ್ಥೆಗಳೆಷ್ಟು; (ಅಂಕಿ-ಅಂಶಗಳೊಂದಿಗೆ ಮಾಹಿತಿ ಒದಗಿಸುವುದು)

(ಇ) ಸ್ಥಳೀಯ ಸಂಸ್ಥೆಗಳ ಅಧ್ಯಕ್ಷ/ಉಪಾಧ್ಯಕ್ಷರ ನೇಮಕಕ್ಕೆ ಸಂಬಂಧಿಸಿದಂ ಮೀಸಲಾತಿ ಬಗ್ಗೆ ಸಂಪೂರ್ಣ ಪಟ್ಟಿಯನ್ನು ಪ್ರಕಟಿಸಲಾಗಿದೆಯೇ; (ಮಾಹಿತಿ ಒದಗಿಸುವುದು) ಬಾಕಿ ಇದ್ದಲ್ಲಿ, ಬಾಕಿ ಇರುವ ಸ್ಥಳೀಯಾಡಳಿತ ಸಂಸ್ಥೆಗಳ ಮಾಹಿತಿ ಒದಗಿಸುವುದು?